All India Radio: Bangalore
Regional Bulletin In Kannada
24.01.2026 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ೧೮ನೇ ಉದ್ಯೋಗ ಮೇಳ ; ಬೆಂಗಳೂರಿನಲ್ಲಿ ನೇಮಕಾತಿ ಪತ್ರ ವಿತರಿಸಿದ ಕೇಂದ್ರ ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ
- ಮುಖ್ಯಮಂತ್ರಿ ಸಿದ್ದರಾಮಯ್ಯ ಧಾರವಾಡ ಪ್ರವಾಸ : ಹುಬ್ಬಳ್ಳಿಯಲ್ಲಿಂದು ಫಲಾನುಭವಿಗಳಿಗೆ ಮನೆ ವಿತರಣೆ
- ಇಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ; ಹೆಣ್ಣು ಮಕ್ಕಳಿಗೆ ಸಮಾನ ಹಕ್ಕುಗಳು, ಶಿಕ್ಷಣ, ಆರೋಗ್ಯಕ್ಕೆ ಕರೆ
- ೯ನೇ ದಿನಕ್ಕೆ ಕಾಲಿಟ್ಟ ಲಕ್ಕುಂಡಿ ಉತ್ಖನನ ಕಾರ್ಯ ; ಬಾವಿಯೊಂದರಲ್ಲಿ ಪ್ರಾಚೀನ ಶಿಲಾ ಶಿಲ್ಪಕಲಾಕೃತಿಗಳು ಪತ್ತೆ

<><><>

ದೇಶದ ಆಯ್ದ ೪೫ ಸ್ಥಳಗಳಲ್ಲಿಂದು ರೋಜ್‌ಗಾರ್ ಮೇಳ ಆಯೋಜಿಸಲಾಗಿದೆ. ಇದರ ಭಾಗವಾಗಿ ಬೆಂಗಳೂರಿನಲ್ಲಿ ಇಂದು ನಡೆದ ಉದ್ಯೋಗ ಮೇಳದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಕೇಂದ್ರ ಸಶಸ್ತ್ರ ಪೊಲೀಸ್ ಪಡೆ ಸೇರಿದಂತೆ ಇನ್ನಿತರ ಇಲಾಖೆಗಳಲ್ಲಿ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನೇಮಕಾತಿ ಪತ್ರಗಳನ್ನು ವಿತರಿಸಿದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ವಸತಿ ಇಲಾಖೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಆಯೋಜಿಸಲಾಗಿರುವ ಎರಡನೇ ಹಂತದ ಮನೆ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕ ಗೃಹ ಮಂಡಳಿ ವತಿಯಿಂದ ರಾಜ್ಯಾದ್ಯಂತ ನಿರ್ಮಾಣಗೊಳ್ಳುತ್ತಿರುವ ೧ ಲಕ್ಷದ ೮೦ ಸಾವಿರದ ೨೫೩ ಮನೆಗಳ ಪೈಕಿ ಎರಡನೇ ಹಂತದ ಭಾಗವಾಗಿ ೪೨ ಸಾವಿರದ ೩೪೫ ಮನೆಗಳನ್ನು ಮುಖ್ಯಮಂತ್ರಿ ಲೋಕಾರ್ಪಣೆಗೊಳಿಸಲಿದ್ದಾರೆ. ಮಂಡಳಿಯ ಸುವರ್ಣ ಮಹೋತ್ಸವದ ಅಂಗವಾಗಿ ಕೊಳಗೇರಿ

ಅಭಿವೃದ್ಧಿ ಮಂಡಳಿ ವತಿಯಿಂದ ಆಯೋಜಿತ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ೪೬ ಸಾವಿರ ಮನೆಗಳನ್ನು ಮುಖ್ಯಮಂತ್ರಿ ವಿತರಿಸಿದರು. ಇದಕ್ಕೂ ಮುನ್ನ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರು ಜಿಲ್ಲಾಡಳಿತದಿಂದ ಗೌರವ ವಂದನೆ ಸ್ವೀಕರಿಸಿದರು. ಇದೇ ವೇಳೆ ಕಾರ್ಯಕ್ರಮಕ್ಕೆ ಆಗಮಿಸಿದ ಎಐಸಿಸಿ ಅಧ್ಯಕ್ಷರು ಮತ್ತು ರಾಜ್ಯಸಭೆಯ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರನ್ನು ಸ್ವಾಗತಿಸಿದರು. ಸಚಿವರಾದ ಕೆ.ಹೆಚ್.ಮುನಿಯಪ್ಪ, ಹೆಚ್.ಸಿ.ಮಹದೇವಪ್ಪ, ಜಮೀರ್ ಅಹಮದ್ ಖಾನ್, ಮಾಜಿ ಸಚಿವ ನಾಗೇಂದ್ರ ಸೇರಿ ಹಲವರು ಉಪಸ್ಥಿತರಿದ್ದರು.

<><><><>

ಇಂದು ದೇಶಾದ್ಯಂತ ರಾಷ್ಟ್ರೀಯ ಹೆಣ್ಣುಮಕ್ಕಳ ದಿನವನ್ನು ಆಚರಿಸಲಾಗುತ್ತಿದೆ. ಈ ದಿನವನ್ನು ಪ್ರತಿವರ್ಷ ಭಾರತದಾದ್ಯಂತ, ಸಮಾಜದಲ್ಲಿ ಹೆಣ್ಣುಮಕ್ಕಳು ಎದುರಿಸುತ್ತಿರುವ ಅಸಮಾನತೆಗಳನ್ನು ಹೋಗಲಾಡಿಸಿ, ಅವರಿಗೆ ಸಮಾನ ಹಕ್ಕುಗಳು, ಶಿಕ್ಷಣ, ಆರೋಗ್ಯ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಆಶಯದೊಂದಿಗೆ ಆಚರಿಸಲಾಗುತ್ತದೆ. ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಹೆಣ್ಣು ಭ್ರೂಣಹತ್ಯೆ ಹಾಗೂ ಬಾಲ್ಯವಿವಾಹದಂತಹ ಪಿಡುಗುಗಳ ವಿರುದ್ಧ ಜಾಗೃತಿ ಮೂಡಿಸುವ ಜೊತೆಗೆ ಹೆಣ್ಣುಮಕ್ಕಳ ಸಬಲೀಕರಣದ ಮೂಲಕ ಸದೃಢ ಸಮಾಜ ಕಟ್ಟಲು ಕರೆ ನೀಡಿದ್ದಾರೆ. ರಾಷ್ಟ್ರೀಯ ಹೆಣ್ಣುಮಕ್ಕಳ ದಿನದ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಹೆಣ್ಣುಮಕ್ಕಳಿಗೆ ಸರಿಯಾದ ಬೆಂಬಲ ದೊರೆತಾಗ ಅವರು ತಮ್ಮ ಭವಿಷ್ಯದ ಜೊತೆಗೆ ಸಮಾಜದ ಭವಿಷ್ಯವನ್ನು ಬಲಪಡಿಸುತ್ತಾರೆ. ಪ್ರತಿಯೊಂದು ಹೆಣ್ಣುಮಗು ಯಾವುದೇ ಅಡೆತಡೆಗಳಿಲ್ಲದೇ ತನ್ನ ಆಕಾಂಕ್ಷೆಗಳನ್ನು ಈಡೇರಿಸಿಕೊಳ್ಳುವಂತಹ ಸಮಾಜ ನಿರ್ಮಾಣ ತಮ್ಮ ಆಶಯ ಎಂದಿದ್ದಾರೆ.

<><><><>

ಖ್ಯಾತ ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತಗಾರ, ಭಾರತ ರತ್ನ ಪುರಸ್ಕೃತ ಪಂಡಿತ ಭೀಮಸೇನ ಜೋಷಿ ಅವರ ಪುಣ್ಯಸ್ಮರಣೆಯ ದಿನವಾದ ಇಂದು ಅವರಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಾಸಕ ಆರ್.ವಿ. ದೇಶಪಾಂಡೆ ಸೇರಿದಂತೆ ಅನೇಕ ಗಣ್ಯರು ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಡಿ.ಕೆ.ಶಿವಕುಮಾರ್, ಗಾಯನದ ಮೂಲಕ

ಇಡೀ ವಿಶ್ವವನ್ನೇ ಮಂತ್ರ ಮುಗ್ಧಗೊಳಿಸಿದ ಸ್ವರ ಸಾಮ್ರಾಟ್, ನಾದ ಭಾಸ್ಕರ ಪಂಡಿತ್ ಭೀಮಸೇನ ಜೋಷಿಯವರು ಸಂಗೀತವನ್ನೇ ತಮ್ಮ ಉಸಿರಾಗಿಸಿಕೊಂಡು ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತದ ಘನತೆಯನ್ನು ವಿಶ್ವಮಟ್ಟಕ್ಕೆ ಏರಿಸಿದ್ದರು ಎಂದು ಸ್ಮರಿಸಿದ್ದಾರೆ.

<><><><>

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ಇಂದು ಒಂಭತ್ತನೆಯ ದಿನಕ್ಕೆ ಕಾಲಿಟ್ಟಿದೆ. ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಬಳಿ ಇಂದು ಸುಮಾರು ಒಂಬತ್ತು ಅಡಿಗಳ ಆಳದಲ್ಲಿ ಉತ್ಖನನ ಕಾರ್ಯ ಪ್ರಗತಿಯಲ್ಲಿದೆ. ಲಕ್ಕುಂಡಿ ಗ್ರಾಮದ ಹೊರವಲಯದ ತೋಟದ ಮನೆ ಗೋಡೆಯಲ್ಲಿ ಮತ್ತು ಬಾವಿಯ ಗೋಡೆಯಲ್ಲಿ ಕಲ್ಯಾಣ ಚಾಲುಕ್ಯರ ಮತ್ತು ವಿಜಯನಗರ ಅರಸರ ಕಾಲದ ಗತವೈಭವ ಸಾರುವ ಶಿಲಾ ಶಿಲ್ಪಕಲಾಕೃತಿಗಳು ದೊರೆತಿರುವುದು ವಿಶೇಷವಾಗಿದೆ. ಕಲ್ಯಾಣ ಚಾಲುಕ್ಯರ ಕಾಲದ ಹಸಿರು ಪಚ್ಚೆ ಕಲ್ಲು, ಲೋಹದ ಉಂಡೆ ಮತ್ತು ನಾಣ್ಯಾಕಾರದ ಬಿಲ್ಲೆ ಉತ್ಖನನ ಕಾರ್ಯ ಮಾಡುವ ಸಂದರ್ಭದಲ್ಲಿ ದೊರೆತಿವೆ. ಇನ್ನು ನಾಲ್ಕರಿಂದ ಐದು ಅಡಿಗಳಷ್ಟು ಉತ್ಖನನ ನಡೆದರೆ, ನೈಜ ಲಕ್ಕುಂಡಿಯ ಗತವೈಭವ ಜಗತ್ತಿಗೆ ಪರಿಚಯವಾಗಲಿದೆ ಎಂದು ಪುರಾತತ್ವ ಇಲಾಖೆಯ ಅಧಿಕಾರಿಗಳ ಅಭಿಪ್ರಾಯವಾಗಿದೆ.

<><><><>

ಚಾಮರಾಜನಗರ ಜಿಲ್ಲಾ ಪೊಲೀಸ್ ಮತ್ತು ಚಾಮರಾಜನಗರ ಸಂಚಾರ ಪೊಲೀಸ್ ಠಾಣೆ ವತಿಯಿಂದ ರಸ್ತೆ ಸುರಕ್ಷತಾ ಸಪ್ತಾಹ-೨೦೨೬ ಕಾರ್ಯಕ್ರಮದ ಪ್ರಯುಕ್ತ ಚಾಮರಾಜನಗರದ ಪ್ರಮುಖ ರಸ್ತೆಗಳಲ್ಲಿ ಇಂದು ಬೆಳಗ್ಗೆ ಬೈಕ್ ಜಾಥಾ ಯಶಸ್ವಿಯಾಗಿ ನಡೆಯಿತು. ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಬೈಕ್ ಜಾಥಾಗೆ ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜು ಹಸಿರು ನಿಶಾನೆ ತೋರಿ ಮಾತನಾಡಿ, ಬೈಕ್ ಚಾಲನೆ ಸಮಯದಲ್ಲಿ ಹೆಲ್ಮೆಟ್ ಧರಿಸಿ ಜೀವಾಪಾಯದಿಂದ ರಕ್ಷಣೆ ಪಡೆಯಿರಿ, ವಾಹನ ಚಾಲನೆಯಲ್ಲಿ ಮೊಬೈಲ್ ಬಳಕೆ ಬೇಡ, ಕಾರು ಚಾಲನೆ ಮಾಡುವಾಗ ತಪ್ಪದೆ ಸೀಟ್‌ಬೆಲ್ಟ್ ಧರಿಸಿ, ಅಪ್ರಾಪ್ತ ವಯಸ್ಕರು ವಾಹನ ಚಲಾಯಿಸುವುದು ಶಿಕ್ಷಾರ್ಹ ಅಪರಾಧ. ಪ್ರತಿಯೊಬ್ಬರೂ ರಸ್ತೆ ಸಂಚಾರ ನಿಯಮ ಪಾಲಿಸುವ ಮೂಲಕ ಅಪಘಾತ ಮುಕ್ತ ಸಮಾಜಕ್ಕಾಗಿ ಪೊಲೀಸರೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು. ಚಾಮರಾಜನಗರದ ಪ್ರಮುಖ ರಸ್ತೆಗಳಲ್ಲಿ ಪೊಲೀಸ್ ಸಿಬ್ಬಂದಿ ಬೈಕ್ ಜಾಥಾ ರಸ್ತೆ ಸುರಕ್ಷತೆ ಅರಿವು ಮೂಡಿಸಿದರು.

<><><>

ಇಂದು ಕುಮಾರ ಷಷ್ಠಿ ಅಥವಾ ಸುಬ್ರಹ್ಮಣ್ಯ ಷಷ್ಠಿ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಪ್ರಸಿದ್ಧ ಪುಣ್ಯಕ್ಷೇತ್ರ ಘಾಟಿಯ ಸುಬ್ರಹ್ಮಣ್ಯಸ್ವಾಮಿ ದೇವಾಲಯದಲ್ಲಿ ಕುಮಾರ ಷಷ್ಠಿ ಅಂಗವಾಗಿ ವಿಶೇಷ ಅಲಂಕಾರ ಹಾಗೂ ಪೂಜಾ ಕೈಂಕರ್ಯಗಳು ನಡೆದವು. ಬೆಳಗಿನಿಂದಲೇ ಸಹಸ್ರಾರು ಭಕ್ತಾದಿಗಳು ಸಾಲುಗಟ್ಟಿ ನಿಂತು ದೇವರ ದರ್ಶನ ಪಡೆದರು. ಭಕ್ತಾದಿಗಳು ಹುತ್ತಕ್ಕೆ ಹಾಲೆರೆದು ಪೂಜೆ ಸಲ್ಲಿಸಿದರು. ಸುಬ್ರಹ್ಮಣ್ಯಸ್ವಾಮಿ ತೆಪ್ಪೋತ್ಸವ ಕಾರ್ಯಕ್ರಮ ನೆನ್ನೆ ರಾತ್ರಿ ವಿಜೃಂಭಣೆಯಿಂದ ನೆರವೇರಿತು. ಚಿಕ್ಕಬಳ್ಳಾಪುರ ತಾಲ್ಲೂಕಿನ ಸುಪ್ರಸಿದ್ಧ ಚಿತ್ರಾವತಿ ಸುಬ್ರಮಣ್ಯೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಮತ್ತು ರಥೋತ್ಸವ ಇಂದು ಶ್ರದ್ಧಾಭಕ್ತಿ ಹಾಗೂ ವಿಜೃಂಭಣೆಯಿಂದ ಜರುಗಿತು.

<><><>

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ನಿಮಿಷಾಂಬ ದೇವಸ್ಥಾನದಲ್ಲಿ ಫೆಬ್ರವರಿ ೧ ರಂದು ಮಾಘ ಶುದ್ಧ ಹುಣ್ಣಿಮೆ ನಡೆಯಲಿದೆ. ಈ ಪ್ರಯುಕ್ತ ಹೆಚ್ಚು ಸಾರ್ವಜನಿಕರು ಸೇರುವ ಸಾಧ್ಯತೆ ಇದ್ದು, ಕ್ಷೇತ್ರದಲ್ಲಿ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ ತಿಳಿಸಿದ್ದಾರೆ. ಮಂಡ್ಯದಲ್ಲಿ ಆಯೋಜಿಸಲಾಗಿದ್ದ ಮಾಘ ಶುದ್ಧ ಪೌರ್ಣಮಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ಸುಮಾರು ಒಂದು ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಸೇರುವ ನಿರೀಕ್ಷೆಯಲ್ಲಿ ಇರುವುದರಿಂದ ಕ್ಷೇತ್ರದಲ್ಲಿ ಸೂಕ್ತ ಭದ್ರತೆಗಾಗಿ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿ, ದೇವಾಲಯದ ಅಗತ್ಯವಿರುವ ಸ್ಥಳಗಳಲ್ಲಿ ತಾತ್ಕಾಲಿಕ ಸಿಸಿಟಿವಿಗಳನ್ನು ಅಳವಡಿಸಿ ಭಕ್ತಾದಿಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

<><><>

ಚಾಲಕರಿಗೆ ನೈತಿಕ ಸ್ಥೈರ್ಯ ತುಂಬುವ ಹಾಗೂ ಅವರ ಜವಾಬ್ದಾರಿಯುತ ಸೇವೆಯನ್ನು ಗೌರವಿಸುವ ಉದ್ದೇಶದಿಂದ ಇಂದು ಚಾಲಕರ ದಿನ ಆಚರಣೆ ಮಾಡಲಾಗುತ್ತಿದೆ. ವಿಜಯಪುರದ ಕೇಂದ್ರ ಬಸ್ ನಿಲ್ದಾಣದಲ್ಲಿ ಶನಿವಾರ ನಡೆದ ಚಾಲಕರ ದಿನಾಚರಣೆ ಕಾರ್ಯಕ್ರಮಕ್ಕೆ ಪ್ರಾದೇಶಿಕ ಸಾರಿಗೆ ಅಧಿಕಾರಿ ವಾಸಿಮ್ ಬಾಬಾ ಮುದ್ದೇಬಿಹಾಳ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಪ್ರಯಾಣಿಕರ ಸುರಕ್ಷತೆಯೊಂದಿಗೆ ಅವರ ನಂಬಿಕೆಗಳಿಸಿ, ಸೇವೆ

ಸಲ್ಲಿಸುತ್ತಿರುವ ಚಾಲಕರ ಕಾರ್ಯ ಅತ್ಯಂತ ಮಹತ್ವದ್ದಾಗಿದ್ದು,ಅವರ ಕಾರ್ಯ ಜವಾಬ್ದಾರಿಯುತ ಮತ್ತು ಗೌರವಯುತ ಸೇವೆಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಭಾಗವಾಗಿ ಈ ಬಾರಿ ವಿಜಯಪುರ ವಿಭಾಗದ ೨೪ ಚಾಲನಾ ಸಿಬ್ಬಂದಿಗಳನ್ನು ಆಯ್ಕೆ ಮಾಡಲಾಗಿದ್ದು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿಯಲ್ಲಿ ನಿಗಮದ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರು ಅಧಿಕಾರಿಗಳನ್ನು ಸನ್ಮಾನಿಸುವ ಕಾರ್ಯಕ್ರಮವಿದೆ.

<><><><>

ರಾಜ್ಯದ ಪ್ರತಿ ಗ್ರಾಮಗಳ ಪ್ರತಿ ವಾರ್ಡ್‌ಗಳಲ್ಲಿ ಕನಿ? ೧೦೦ ಜನ ಸದಸ್ಯರನ್ನು ಒಳಗೊಂಡ 'ಗಾಂಧಿ ಗ್ರಾಮ ಸ್ವರಾಜ್ಯ ಬಳಗ' ರಚಿಸಿ, ಎಲ್ಲಾ ಸಮಾಜಗಳ ಪ್ರತಿನಿಧಿಗಳು ಇರುವಂತೆ ನೋಡಿಕೊಳ್ಳಬೇಕೆಂದು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ್ ಹೇಳಿದ್ದಾರೆ. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿ ನಡೆದ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ನಡುವೆ ಸಮನ್ವಯವಿದ್ದರೆ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಒತ್ತಿ ಹೇಳಿದರು.

<><><><>

ಹೆಚ್.ಐ.ವಿ ಸೊಂಕಿತ ಅಥವಾ ಬಾಧಿತರು ಓಂಬುಡ್ಸ್‌ಮನ್ ರವರೊಂದಿಗೆ ನೇರವಾಗಿ ಸಂವಾದ ನಡೆಸಲು ಇದೇ ೨೯ರಂದು ಬೆಳಗ್ಗೆ ೧೦ ಗಂಟೆಯಿಂದ ೨ ಗಂಟೆವರೆಗೆ ಮತ್ತು ಮಧ್ಯಾಹ್ನ ೩ ಗಂಟೆಯಿಂದ ಸಂಜೆ ೫ ಗಂಟೆಯವರೆಗೆ ನೇರ ಸಂವಾದವನ್ನು ಹಮ್ಮಿಕೊಳ್ಳಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>